**<u>ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ</u>**

## <u>ಸಿ.ಸಿ.ನಂ.696/2018</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಬಸವಣ್ಣ | ಸಿ.ಡಬ್ಲ್ಯೂ-4 |
| ತಂದೆಯ ಹೆಸರು / ಗಂಡನ ಹೆಸರು | : | ಮಹದೇವಪ್ಪ | ಪಿ.ಡಬ್ಲ್ಯೂ-1 |
| ವಯಸ್ಸು | : | 62 ವರ್ಷ | - |
| ಉದ್ಯೋಗ | : | ವ್ಯವಸಾಯ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕ: **04.11.2023.** |
| ವಾಸಸ್ಥಳ | : | ಕಾಟ್ವಾಳು ಗ್ರಾಮ | - |

**<u>ಮುಖ್ಯ ವಿಚಾರಣೆ: ಎಪಿಪಿ ರವರಿಂದ:</u>**

ಚಾಸಾ-3 ನನಗೆ ಗೊತ್ತಿಲ್ಲ, ಆರೋಪಿತರು ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಅಮಾನತ್ತು ಮಹಜರ್ ಕ್ರಮ ಜರುಗಿಸಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ, ಒಂದು ಬಿಳಿ ಹಾಳೆಯ ಮೇಲೆ ಸಹಿ ಮಾಡಲು ಹೇಳಿದ್ದಕ್ಕೆ ನಾನು ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯು ತಮ್ಮದೇ ಎಂದು ನೋಡಿ ಗುರುತಿಸುವಂತೆ ಹೇಳಿದ್ದು ಸಾಕ್ಷಿಯು ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಪಿಅಮಾನತ್ತು ಮಹಜರ್ ನಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ.

**(ಎಪಿಪಿಯವರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿದಾರರನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು: ಎಪಿಪಿ ರವರಿಂದ:</u>**

ದಿ: 23.11.2017 ರಂದು ಮಧ್ಯಾಹ್ನ 2.45 ರ ಸಮಯದಲ್ಲಿ ಸರಗೂರು ಪೊಲೀಸ್ ಠಾಣೆಯಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪೊಲೀಸರು ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿ ಆರೋಪಿಯ ಬಾಬ್ತು 90 ಎಂ.ಎಲ್ ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 30 ಪೌಚುಗಳಎ ಹಾಗೂ 90 ಎಂ.ಎಲ್ ನ ಒರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 8 ಪೌಚುಗಳು ಹಾಗೂ ಒಂದು ಪ್ಲಾಸ್ಟಿಕ್ ಚೀಲವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಮಾನತ್ತು ಮಹಜರಿಗೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ: ಇಲ್ಲ</u>**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಓ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**